(ದಿನಾಂಕಃ 29.10.2025 ರಂದು ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು)

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಾದ ಶ್ರೀ ಎನ.ಜಿ.ಎಸ್ ರವರಿಂದ ಃ-**

1. ದಾವಾ ಆಸ್ತಿಯ ವಿಸ್ತೀರ್ಣ 30 ಸೆಂಟ್ಸ್ ಇರುತ್ತದೆ. 30 ಸೆಂಟ್ಸ್ ಎಂದರೆ 11.5 ಗುಂಟೆ ಆಗಿರುತ್ತದೆ. ನಾನು ಹಾಜರುಪಡಿಸಿದ ದಾಖಲೆಗಳಲ್ಲಿ ದಾವಾ ಆಸ್ತಿಯು 12 ಗುಂಟೆ ಇರುತ್ತದೆ ಎಂದು ಸೂಚಿಸಿದರೆ ಸರಿ.

2. ನಾನು 11.5 ಗುಂಟೆ ಅಥವಾ 12 ಗುಂಟೆ ಸ್ವಾಧೀನದಲ್ಲಿ ಇರುತ್ತಿರಾ ಎಂಬ ಪ್ರಶ್ನೆಗೆ ಸಾಕ್ಷಿಯು 11.5 ಗುಂಟೆ ಸ್ವಾಧೀನದಲ್ಲಿ ಇರುತ್ತೇವೆ ಎಂದು ನುಡಿಯುತ್ತಾರೆ. ನಾವು 11.5 ಗುಂಟೆ ಸ್ವಾಧೀನದಲ್ಲಿ ಇದ್ದು 12 ಗುಂಟೆಗೆ ಈ ದಾವೆಯನ್ನು ಸಲ್ಲಿಸಿರುತ್ತೇವೆ ಎಂದರೆ ಸರಿ.

3. ನಾನು ಹಾಜರುಪಡಿಸಿದ ನಿಪಿ12 ರಲ್ಲಿ ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಹಾಕಿದ ಸರ್ವೆ ನಂಬರ್ ಇರುವುದಿಲ್ಲ ಎಂದು ಸೂಚಿಸಿದರೆ ಸಾಕ್ಷಿಯು ಸದರಿ ನಿಪಿ12 ರ ದಾಖಲೆಯನ್ನು ಕುಲಂಕುಶವಾಗಿ ಪರಿಶೀಲಿಸಿ ಅದು ದಾವಾ ಆಸ್ತಿಗೆ ಸಂಬಂಧಪಟ್ಟಿರುವುದಿಲ್ಲ ಎಂದು ನುಡಿಯುತ್ತಾರೆ.

4. ನನಗೆ ದಾವಾ ಆಸ್ತಿಯ ಸರ್ವೆ ನಂಬರ್ ಅನ್ನು ಹಾಜರುಪಡಿಸಲು ತೊಂದರೆ ಇರುವುದಿಲ್ಲ ಎಂದು ಸೂಚಿಸಿದರೆ ಸರಿ. ಸಾಕ್ಷಿಯು ಹಾಜರುಪಡಿಸುತ್ತೇನೆ ಎಂದು ನುಡಿಯುತ್ತಾರೆ.

5. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ನಮಗೆ ಮಂಜೂರಾದ ದಾವಾ ಆಸ್ತಿಯ ವಿಸ್ತೀರ್ಣಕ್ಕೆ ಸಂಬಂಧಿಸಿದಂತೆ ಪಕ್ಕಾ ಪೊಡೀ ಆಗಿರುವುದಿಲ್ಲ ಎಂದು ಸೂಚಿಸಿದರೆ ಸಾಕ್ಷಿಯು ಅದಕ್ಕೆ ಅರ್ಜಿಯನ್ನು ಸಲ್ಲಿಸಿರುತ್ತೇವೆ ಅದು ಬಾಕಿ ಇರುತ್ತದೆ ಎಂದು ನುಡಿಯುತ್ತಾರೆ. ನಾನು ದಾವಾ ಆಸ್ತಿಗೆ ಸಂಬಂಧಪಟ್ಟಿರುವ ಪೋಡಿ ಮಾಡಲು ಅರ್ಜಿ ಸಲ್ಲಿಸಿರುತ್ತೇನೆ ಎಂದು ತೋರಿಸಲು ಸೂಕ್ತವಾದ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ.

6. ನಾನು ದಾವಾ ಆಸ್ತಿಯನ್ನು ನಿರ್ದಿಷ್ಟವಾಗಿ ಗುರುತಿಸಲು ಅಳತೆ ಮಾಡಿಸಿರುವುದಿಲ್ಲ ಎಂದರೆ ಸರಿಯಲ್ಲ ಸಾಕ್ಷಿಯು ಮುಂದುವರಿದು ನಕ್ಷೆ ಇರುತ್ತದೆ ಎಂದು ನುಡಿಯುತ್ತಾರೆ. ನಾನು ಸದರಿ ನಕ್ಷೆಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿರುವುದಿಲ್ಲ ಎಂದು ಸೂಚಿಸಿದರೆ ಸರಿಯಲ್ಲ.

7. ದಾವಾ ಆಸ್ತಿಯಲ್ಲಿ ಎಷ್ಟು ಕಟ್ಟಡಗಳು ಇರುತ್ತವೆ ಎಂದು ಸೂಚಿಸಿದರೆ ಸಾಕ್ಷಿಯು ಒಂದೇ ಇರುತ್ತದೆ ಎಂದು ನುಡಿಯುತ್ತಾರೆ. ನಾವು ಕಟ್ಟಡದಲ್ಲಿ ವಾಣಿಜ್ಯ ವ್ಯಾಪಾರ ಮಡುತ್ತೇವೆ ಎಂದು ಸೂಚಿಸಿದರೆ ಸರಿ. ನಾವು ವಾಣಿಜ್ಯ ಕಟ್ಟಡವನ್ನು ಕಟ್ಟಬೇಕಾದರೆ ಸಂಬಂಧಪಟ್ಟ ಪ್ರಾಧೀಕಾರದಿಂದ ಅನುಮತಿಯನ್ನು ಪಡೆಯಬೇಕು ಎಂದರೆ ಸರಿ. ನಾನು ನಿಟ್ಟೂರು ಗ್ರಾಮ ಪಂಚಾಯ್ತಿಯಿಂದ ಅನುಮತಿಯನ್ನು ಪಡೆದಿರುತ್ತೇನೆ ಎಂದು ನುಡಿಯುತ್ತಾರೆ.

8. ನಾನು ಗ್ರಾಮ ಪಂಚಾಯ್ತಿ ರವರಿಂದ ಅನುಮತಿ ಪತ್ರವನ್ನು ಪಡೆದಿರುವುದಿಲ್ಲ ಎಂದು ಸೂಚಿಸಿದರೆ ಸರಿಯಲ್ಲ. ನಾನು ಹಾಜರುಪಡಿಸಿದ ನಿಪಿ11 ರಲ್ಲಿ 40 ಸೆಂಟ್ಸ್ ಮಂಜೂರು ಮಾಡಬೇಕು ಎಂಬುದರ ಬಗ್ಗೆ ಉಲ್ಲೇಖ ಇರುತ್ತದೆ ಎಂದು ಸೂಚಿಸಿದರೆ ಸರಿ.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಮುಂದುವರಿದ ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಮುಂದೂಡಲಾಯಿತು.)

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸ. ಎಂ. ಒ.

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,
ಹೊಸನಗರ.